ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಶಾಲೆಗಳನ್ನು ಪ್ರಾರಂಭಿಸುವ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

580(642) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರೋನಾ ಕಾರಣದಿಂದ ಮುಚ್ಚಲ್ಪಟ್ಟ ಶಾಲೆಗಳನ್ನು ಮತ್ತು ತೆರೆಯುವಲ್ಲಿ ಸರ್ಕಾರ ಸ್ಪಷ್ಟ ನಿರ್ಧಾರ ಕೈಗೊಂಡಿದೆಯೇ; ಶಾಲೆಗಳನ್ನು ತೆರೆಯುವ ನಿರ್ಧಾರ ಕೈಗೊಂಡಿದ್ದಲ್ಲಿ, ಅದರ ಮಾರ್ಗಸೂಚಿಗಳೇನು; (ವಿವರ ನೀಡುವುದು)

(ಆ) ವಿದ್ಯಾಗಮದಂತಹ ಬೇರೆ ಯಾವುದಾದರೂ ಪರ್ಯಾಯ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ; (ಮಾಹಿತಿ ನೀಡುವುದು)

(ಇ) ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಪ್ರಸಕ್ತ ಸಾಲಿನ ವೇತನ ಪಾವತಿ ಮಾಡಲಾಗಿದೆಯೇ; (ವಿವರ ನೀಡುವುದು)

(ಈ) ಈ ಕೋವಿಡ್ ಸಂಕಷ್ಟ ಕಾಲದಲ್ಲಿ ಮತ್ತು ಶಾಲೆಗಳು ತೆರೆಯಲ್ಪಟ್ಟರೇ ಗ್ರಾಮೀಣ ಭಾಗದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಬಿಸಿಯೂಟ ಯೋಜನೆ ಜಾರಿಗೊಳಿಸುವುದೇ;

(ಉ) ಈ ಶಾಲೆಗಳು ಮರು ಆರಂಭವಾದರೇ ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿಗಳ ಸುರಕ್ಷತೆಗೆ ಯಾವ ಕ್ರಮ ಕೈಗೊಳ್ಳಲಾಗುವುದು? (ಮಾಹಿತಿ ನೀಡುವುದು)